**ಕರ್ನಾಟಕ ಸರ್ಕಾರ**

ಸಂಖ್ಯೆ: ಗ್ರಾಅಪ 760 ಗ್ರಾಪಂಅ 2014

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ: 11-11-2014

**ಇವರಿಂದ:**

ಸರ್ಕಾರದ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
**ಬೆಂಗಳೂರು.**

**ಇವರಿಗೆ:**

1) ರಾಜ್ಯದ ಎಲ್ಲಾ ಜಿ.ಪಂ.ನ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು
2) ಎಲ್ಲಾ ತಾಲ್ಲೂಕು ಪಂಚಾಯತ್‌ನ ಕಾರ್ಯನಿರ್ವಹಣಾಧಿಕಾರಿಗಳು

**ಮಾನ್ಯರೆ,**

**ವಿಷಯ:** ಗ್ರಾಮ ಪಂಚಾಯತಿಗಳ ತೆರಿಗೆ ವಸೂಲಾತಿ ಹಣವನ್ನು ಕಡ್ಡಾಯವಾಗಿ ವಸೂಲಿ ಮಾಡುವ ಮತ್ತು ತೆರಿಗೆ ವಸೂಲಾತಿ ಹಣವನ್ನು ಕಾಮಗಾರಿಗಳಿಗೆ ಬಳಸಿಕೊಳ್ಳುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 650 ಗ್ರಾಪಂಅ 2014 ದಿನಾಂಕ: 19-09-2014

****

ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 199 ರಲ್ಲಿ ಗ್ರಾಮ ಪಂಚಾಯತಿಗಳು ಪಂಚಾಯತಿ ಪ್ರದೇಶದ ಪರಿಮಿತಿಗೊಳಗಿರುವ ಕೃಷಿ ತೆರಿಗೆ ನಿರ್ಧರಣೆಗೆ ಒಳಪಟ್ಟಿರದ ಕಟ್ಟಡಗಳು ಮತ್ತು ಭೂಮಿಗಳ ಮೇಲೆ ಹಾಗೂ ಗ್ರಾಮ ಪಂಚಾಯತಿಯು ಕುಡಿಯುವುದಕ್ಕೆ ಮತ್ತು ಇತರ ಉದ್ದೇಶಗಳಿಗಾಗಿ ನೀರು ಸರಬರಾಜು ಮಾಡಲು ತೆರಿಗೆ ವಿಧಿಸಲು ಅವಕಾಶ ಕಲ್ಪಿಸಲಾಗಿದೆ.

ಉಲ್ಲೇಖಿತ ಸರ್ಕಾರದ ಸುತ್ತೋಲೆಯಲ್ಲಿ ಗ್ರಾಮ ಪಂಚಾಯತಿಗಳು ತೆರಿಗೆಗಳನ್ನು ಪರಿಷ್ಕರಿಸಲು ಮತ್ತು ವಸೂಲಿ ಮಾಡಲು ಕ್ರಮ ಕೈಗೊಳ್ಳುವಂತೆ ಸೂಚಿಸಿದೆ. ಸದರಿ ಸುತ್ತೋಲೆಯ ಅನುಸಾರ 2014-15ನೇ ಸಾಲಿನಲ್ಲಿ ತೆರಿಗೆ ಪರಿಷ್ಕರಣೆಯನ್ನು ಕಡ್ಡಾಯವಾಗಿ ಮಾಡುವಂತೆ ತಿಳಿಸಿದೆ. ಗ್ರಾಮಪಂಚಾಯತಿಗಳು ತೆರಿಗೆ ಸಂಗ್ರಹಣೆಯ ಗುರಿಯನ್ನು ತಲುಪಲು ಸೂಕ್ತ ಕ್ರಮಗಳನ್ನು ಕೈಗೊಳ್ಳುವಂತೆ ಮತ್ತು ವಿಫಲರಾದ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳುವಂತೆ ನಿರ್ದೇಶನವನ್ನು ನೀಡಲಾಗಿದೆ.

ಕರ್ನಾಟಕ ವಿಧಾನ ಮಂಡಲದ ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್ ರಾಜ್ ಸಂಸ್ಥೆಗಳ ಸಮಿತಿಯ 3ನೇ ಮತ್ತು 6ನೇ ವರದಿಯಲ್ಲಿ ಸರ್ಕಾರದ ಯೋಜನೆಗಳನ್ನು ಉತ್ತಮ ಮಟ್ಟದಲ್ಲಿ ಕಾರ್ಯನಿರ್ವಹಿಸುವ ನಿಟ್ಟಿನಲ್ಲಿ, ಗ್ರಾಮ ಪಂಚಾಯತ್ ಮತ್ತು ತಾಲ್ಲೂಕು ಪಂಚಾಯತ್ ಮಟ್ಟದಲ್ಲಿ ಪಿ.ಡಿ.ಓಗಳು ಹಾಗೂ ತಾಲ್ಲೂಕು ಅಧಿಕಾರಿಗಳು ಕರ ವಸೂಲಾತಿಯನ್ನು ಕಡ್ಡಾಯವಾಗಿ ಕೈಗೊಂಡು, ಪಂಚಾಯತ್ ನಿಂದ ನಡೆಸುವ ಯೋಜನೆಗಳ ಕಾಮಗಾರಿಗಳಿಗೆ ಕರ ವಸೂಲಾತಿ ಹಣವನ್ನು ಬಳಸಿ ಸೂಕ್ತ ರೀತಿಯಲ್ಲಿ ಬಳಸಬೇಕೆಂದು ಹಾಗೂ ಗ್ರಾಮ ಪಂಚಾಯತ್ ಮಟ್ಟದಲ್ಲಿ ಪಿ.ಡಿ.ಓ.ಗಳ ಸಭೆಯನ್ನು ಕರೆದು, ನಿಯಮಾವಳಿ ರೀತ್ಯಾ, ಕಡ್ಡಾಯವಾಗಿ ಕರ ವಸೂಲಿ ಮಾಡಲು ಕ್ರಮ ತೆಗೆದುಕೊಳ್ಳಲು ನಿರ್ದೇಶನ ನೀಡಬೇಕೆಂದು ಮತ್ತು ತೆರಿಗೆ ವಸೂಲು ಮಾಡಲು ನಿರ್ಲಕ್ಷ್ಯವಹಿಸುವ ಅಧಿಕಾರಿಗಳ ವಿರುದ್ಧ ನಿರ್ದಾಕ್ಷಿಣ್ಯವಾಗಿ ಶಿಸ್ತಿನ ಕ್ರಮ ಜರುಗಿಸುವಂತೆ ಸಮಿತಿ ಶಿಫಾರಸ್ಸು ಮಾಡಿರುತ್ತದೆ.

ಆದುದರಿಂದ ತಾಲ್ಲೂಕು ಪಂಚಾಯತಿಯ ಮಟ್ಟದಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಸಭೆಯನ್ನು ಕರೆದು ನಿಯಮಗಳ ಅನುಸಾರ ಗ್ರಾಮ ಪಂಚಾಯತಿಗಳು ತೆರಿಗೆ ವಸೂಲಾತಿಯನ್ನು ಕಡ್ಡಾಯವಾಗಿ ಮಾಡಲು ಕ್ರಮ ತೆಗೆದುಕೊಳ್ಳುವಂತೆ ಹಾಗೂ ಗ್ರಾಮ ಪಂಚಾಯತಿಗಳಿಂದ ನಡೆಸುವ ಯೋಜನೆಗಳ ಕಾಮಗಾರಿಗಳಿಗೆ ಗ್ರಾಮ ಪಂಚಾಯತಿಗಳ ತೆರಿಗೆ ವಸೂಲಾತಿ ಹಣವನ್ನು ಸೂಕ್ತ ರೀತಿಯಲ್ಲಿ ಬಳಸಿಕೊಳ್ಳುವಂತೆ ತಿಳಿಸಿದೆ.

ಮುಂದುವರೆದು, ಗ್ರಾಮ ಪಂಚಾಯತಿಗಳ ತೆರಿಗೆ ವಸೂಲಾತಿ ಮಾಡಲು ನಿರ್ಲಕ್ಷ್ಯ ವಹಿಸುವ ಅಧಿಕಾರಿಗಳ ವಿರುದ್ಧ ಮತ್ತು ಗ್ರಾಮ ಪಂಚಾಯತಿಗಳಿಂದ ನಡೆಸುವ ಯೋಜನೆಗಳ ಕಾಮಗಾರಿಗಳಿಗೆ ಗ್ರಾಮ ಪಂಚಾಯತಿಗಳ ತೆರಿಗೆ ವಸೂಲಾತಿ ಹಣವನ್ನು ಸೂಕ್ತ ರೀತಿಯಲ್ಲಿ ಬಳಸಿಕೊಳ್ಳದಿರುವವರ ವಿರುದ್ಧ ನಿಯಮಾನುಸಾರ ಶಿಸ್ತು ಕ್ರಮ ಜರುಗಿಸುವಂತೆ ಕೋರಿದೆ.

ತಮ್ಮ ವಿಶ್ವಾಸಿ,

(ಗಂಗಾರಾಮ್ ಬಡೇರಿಯ)
ಸರ್ಕಾರದ ಕಾರ್ಯದರ್ಶಿ (ಪಂ.ರಾಜ್),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.